# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1422 |
| 2 | ಸದಸ್ಯರ ಹೆಸರು | : | ಶ್ರೀ ಸಿ.ಎನ್ ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| 3 | ಉತ್ತರಿಸುವ ದಿನಾಂಕ | : | 18.12.2025 |
| 4 | ಉತ್ತರಿಸುವ ಸಚಿವರು | : | ಗೃಹ ಸಚಿವರು |

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ. | ರಾಜ್ಯದ ಪೊಲೀಸ್ ಇಲಾಖೆಯಲ್ಲಿ ಪೊಲೀಸ್ ಕಾನ್ಸ್ ಟೇಬಲ್ ಹುದ್ದೆಗಳನ್ನು 2003ರಿಂದ ನೇರ ನೇಮಕಾತಿ ಸಿಇಟಿ (ಸಾಮಾನ್ಯ ಪ್ರವೇಶ ಪರೀಕ್ಷೆ) ಮುಖಾಂತರ ಆಯ್ಕೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ. | ಇವರುಗಳ ಪೈಕಿ ಶೇಕಡಾ 75ರಷ್ಟು ಮಂದಿ ಪದವೀಧರರಾಗಿದ್ದು, 20 ವರ್ಷ ಸೇವೆ ಸಲ್ಲಿಸಿದ್ದರೂ ಕೇವಲ ಒಂದು ಹುದ್ದೆಗೇರುವುದಕ್ಕೆ ಮಾತ್ರ ಅವಕಾಶವಿರುವುದು. ಸಬ್ ಇನ್ಸ್‌ಪೆಕ್ಟರ್ (ಸಿವಿಲ್) ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ನೇರ ನೇಮಕಾತಿ ಮತ್ತು ಮುಂಬಡ್ತಿ ಹುದ್ದೆಗಳ ನಡುವೆ 70:30 ರ ಅನುಪಾತವಿರುವುದನ್ನು ಸರ್ಕಾರ ಮನಗಂಡಿದೆಯೇ; | "ಕರ್ನಾಟಕ ರಾಜ್ಯ ಪೊಲೀಸ್ ಲಿಪಿಕ ಸೇವೆಗಳನ್ನು ಒಳಗೊಂಡ (ನೇಮಕಾತಿ) ನಿಯಮಗಳು-2004" ರಲ್ಲಿ ಪಿ.ಎಸ್.ಐ ಹುದ್ದೆಯ ನೇರ ನೇಮಕಾತಿ ಮತ್ತು ಮುಂಬಡ್ತಿಗೆ ಶೇಕಡಾ 70:30ರ ಅನುಪಾತವನ್ನು ನಿಗದಿ ಪಡಿಸಲಾಗಿದೆ. |
| ಇ. | ಹಾಗಿದ್ದಲ್ಲಿ, ಈ ಅನುಪಾತವನ್ನು ಶೇಕಡಾ 50:50ರ ಅನುಪಾತಕ್ಕೆ ನಿಗಧಿಪಡಿಸಿ ಎಎಸ್ಐ ಹುದ್ದೆಯಿಂದ ಪಿಎಸ್ಐ ಹುದ್ದೆಗೆ ಮುಂಬಡ್ತಿ ಹೊಂದಲು ಇರುವ ಸೇವಾವಧಿಯನ್ನು 4 ವರ್ಷದಿಂದ 3 ವರ್ಷಕ್ಕೆ ಇಳಿಸಲು ವೃಂದ ಮತ್ತು ನೇಮಕಾತಿ ನಿಯಮಗಳಿಗೆ ಸೂಕ್ತ ತಿದ್ದುಪಡಿ ತರಲು ಕ್ರಮ ಕೈಗೊಳ್ಳುವುದೇ; | ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಪಿಎಸ್ಐ ಹುದ್ದೆಗೆ ಅನುಭವವುಳ್ಳ ಮತ್ತು ಯುವ ಅಧಿಕಾರಿಗಳನ್ನು ಪರಿಗಣಿಸಿ ನೇರ ನೇಮಕಾತಿ ಮತ್ತು ಮುಂಬಡ್ತಿಗೆ ಶೇಕಡಾ 70:30ರ ಅನುಪಾತವನ್ನು ನಿಗಧಿಪಡಿಸಿರುವುದು ಹಾಗೂ ಎಎಸ್ಐ ಹುದ್ದೆಯಿಂದ ಪಿಎಸ್ಐ ಹುದ್ದೆಯ ಮುಂಬಡ್ತಿಗೆ ಕನಿಷ್ಟ ಸೇವಾವಧಿಯನ್ನು 04 ವರ್ಷಕ್ಕೆ ನಿಗಧಿಪಡಿಸಿರುವುದು ಇಲಾಖೆಯ ಕಾರ್ಯನಿರ್ವಹಣೆ ಮತ್ತು ಆಡಳಿತಕ್ಕೆ ಪೂರಕವಾಗಿರುತ್ತದೆ.<br>ಪಿಎಸ್ಐ ಹುದ್ದೆಯ ಮುಂಬಡ್ತಿ ಮತ್ತು ನೇರ ನೇಮಕಾತಿಯ ಅನುಪಾತವನ್ನು ಬದಲಾಯಿಸುವ ಹಾಗೂ ಪಿಎಸ್ಐ ಹುದ್ದೆಯ ಮುಂಬಡ್ತಿಗೆ ಕನಿಷ್ಟ ಸೇವಾವಧಿಯನ್ನು 4 ವರ್ಷದಿಂದ 03 ವರ್ಷಕ್ಕೆ ಕಡಿತಗೊಳಿಸುವ ಯಾವುದೇ ಪ್ರಸ್ತಾವನೆ ಇರುವುದಿಲ್ಲ. |

**ಹೆಚ್‌ಡಿ 292 ಪಿಪಿಎಸ್ 2025**

**(ಡಾ|| ಜಿ. ಪರಮೇಶ್ವರ)**
ಗೃಹ ಸಚಿವರು